## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಚಿಕ್ಕಮಗಳೂರು

**ಅಧಿಸೂಚನೆ ಸಂಖ್ಯೆ: ADMN- 3/2022 ದಿನಾಂಕ:12.08.2022**

ವಿಷಯಃ- ಬೆರಳಚ್ಚು-ನಕಲುಗಾರರ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖಃ- 1. ಈ ಕಛೇರಿ ಅಧಿಸೂಚನೆ ಸಂಖ್ಯೆ ADMN.3/2019 ದಿ: 10.01.2019

2. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA-II 128/2012 ದಿಃ 18-09-2018.

- - -

**ಆನ್ ಲೈನ್ ಮೂಲಕ ಅರ್ಜಿಗಳನ್ನು ದಿನಾಂಕಃ 16.08.2022 ರಿಂದ ಸಲ್ಲಿಸಬಹುದಾಗಿದೆ**

**ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಃ 15.09.2022, ಸಮಯ ರಾತ್ರಿ 11.59 ಗಂಟೆಯವರೆಗೆ**

**ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕಃ 17.09.2022**

ಚಿಕ್ಕಮಗಳೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಬೆರಳಚ್ಚು-ನಕಲುಗಾರರ (Typist-copyist) ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಚಿಕ್ಕಮಗಳೂರು ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್**"https://districts.ecourts.gov.in/chikkamagaluru/recruitmen"** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ **ದಿ:16.08.2022 ರಿಂದ ದಿ:15.09.2022** ರ ರಾತ್ರಿ **11.59**ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

1. ಬೆರಳಚ್ಚು-ನಕಲುಗಾರರು (Typist-Copyist)
   - (1) ಹುದ್ದೆಗಳ ಸಂಖ್ಯೆ: 01 ಹಿಂಬಾಕಿ ಹುದ್ದೆ
   - (2) ವೇತನ ಶ್ರೇಣಿ : **21400-500-22400-550-24600-600-27000-650-29600-750-32600-850-36000-950-39800-1100-42000** ಮತ್ತು ಇತರೆ ಭತ್ಯೆಗಳು.
   - (3) ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಅಂ.ವಿ. | ಇತರೆ | ಒಟ್ಟು |
|---|---|---|---|
| ಸಾ.ಅ. | 01* (ದೃಷ್ಟಿಮಾಂದ್ಯ) | - | 1 |

***1 ಹಿಂಬಾಕಿ ಹುದ್ದೆ ಬೆರಳಚ್ಚು ನಕಲುಗಾರರುಃ**

1. ಸಾಮಾನ್ಯ ಅಭ್ಯರ್ಥಿ ಅಂಗವಿಕಲ (ದೃಷ್ಟಿದೋಷ)-1ಹುದ್ದೆ

ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಆಯಾ ಪ್ರವರ್ಗದ ಇತರ ಅಂಗವಿಕಲತೆಯುಳ್ಳ ಅರ್ಹ ವಿಕಲಚೇತನ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಯಾವುದೇ ವಿಕಲ ಚೇತನ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ, ಆಯಾ ಪ್ರವರ್ಗದ ಇತರ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲಾಗುವುದು.

ವರ್ಗೀಕರಣವನ್ನು ಈ ಕೆಳಕಂಡ ಸರ್ಕಾರಿ ಆದೇಶಗಳ ಪ್ರಕಾರ ಮಾಡಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ.DPAR 08 SRS 95, ದಿ:20.06.1995
2. ಸರ್ಕಾರಿ ಆದೇಶ ಸಂಖ್ಯೆ.DPAR 08 SRS 95, ದಿ:04.01.2008
3. ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ 128 ಸೆನೆನಿ 2006 ದಿ: 01.08.2009

4) ಶೈಕ್ಷಣಿಕ ವಿದ್ಯಾರ್ಹತೆ :

ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2021 ರನ್ವಯ

1. ದ್ವಿತೀಯ ಪಿ.ಯು.ಸಿ ಅಥವಾ ಮೂರು ವರ್ಷಗಳ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಕಿರಿಯ ದರ್ಜೆ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

**(5) : ವಯೋಮಿತಿ (ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ) ::**

**ಕನಿಷ್ಠ ವಯೋಮಿತಿ** : 18 ವರ್ಷ

**ಗರಿಷ್ಠ ವಯೋಮಿತಿ** : ಸಾಮಾನ್ಯ ವರ್ಗ - 35 ವರ್ಷ

2ಎ /2ಬಿ /3ಎ /3ಬಿ - 38 ವರ್ಷ

ಪ.ಜಾ/ಪ.ಪಂ/ಪ್ರವರ್ಗ-1 - 40 ವರ್ಷ

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಅಂದರೆ Armed forces of the union Navy, Army, Airforce ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**6) ಅರ್ಜಿ ಸಲ್ಲಿಸುವ ವಿಧಾನ:**

**ಪಾವತಿಸಬೇಕಾದ ನಿಗದಿತ ಶುಲ್ಕ ಮತ್ತು ವಿಧಾನ:**

| | |
|---|---|
| ಸಾಮಾನ್ಯ ವರ್ಗ | ರೂ.300-00 |
| ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳಿಗೆ | ರೂ.150-00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ "https://districts.ecourts.gov.in/chikkamagaluru-onlinerecruitment" ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect ಮೂಲಕ online payment through net banking/credit card /debit card/challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ print out ಅನ್ನು ಪಡೆದುಕೊಂಡು ಎಸ್.ಬಿ.ಐ.ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಮರುಪಾವತಿ ಮಾಡಲಾಗುವುದಿಲ್ಲ.

**(7) ಆಯ್ಕೆ ವಿಧಾನ:-**

1. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದೆಗಳ ನೇಮಕಾತಿ) ನಿಯಮ, 1982 **ಹಾಗೂ (ತಿದ್ದುಪಡಿ) ನಿಯಮಗಳು** 2007 **ಮತ್ತು** 2021 ರ ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. 1 ಹುದ್ದೆಗೆ 5 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. (1:5 ರ ಅನುಪಾತದಲ್ಲಿ)

**ಟಿಪ್ಪಣಿ:** ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು. ಮತ್ತು ಸಂದರ್ಶನವು 5 ಅಂಕಗಳನ್ನು ಒಳಗೊಂಡಿರುತ್ತದೆ.

**3. ಪರಿವೀಕ್ಷಣಾ ಅವಧಿ :**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ ಹಾಗೂ ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ನಿಯಮ ಪ್ರಕಾರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

**4. ಪಿಂಚಣಿ ಸೌಲಭ್ಯ:**

1. ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ. (ಎಸ್.ಪಿ.ಎಲ್.)/04/ಪಿ/ಇ/ಟಿ/2005. ದಿ:31.03.2006.
2. ಸರ್ಕಾರದ ಆದೇಶ ಸಂಖ್ಯೆ:ಆಇ 34 ಪಿಇಎನ್ 2018, ಬೆಂಗಳೂರು ದಿನಾಂಕ: 23.06.2018 ರಂತೆ ಅನ್ವಯಿಸುವುದು.

**ಅಭ್ಯರ್ಥಿಗಳು ON-LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. **ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.**
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ X 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

   ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

   ಇ) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.
5. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು down load ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.
7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು : ಸಲ್ಲಿಸಲು ದಿ:**15.09.2022ರ** ರಾತ್ರಿ **11.59**ರವರೆಗೆ ಅವಕಾಶವಿರುತ್ತದೆ.

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ:17.09.2022ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಅರ್ಹ ಅಭ್ಯರ್ಥಿಗಳಿಗೆ **SMS & E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.
9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
10. ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ತಿದ್ದುಪಡಿಯಾದ ನಿಯಮ 11 ರ ಪ್ರಕಾರ ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಹೌದು ಅಥವಾ ಇಲ್ಲ ಎಂಬುದನ್ನು ಆಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು .
11. ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ-1ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.
12. ಮಾಜಿ ಸೈನಿಕರು, ವಿಧವೆಯರು ಸಕ್ಷಮ ಪ್ರಾಧಿಕಾರಿಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
13. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅಂಗವಿಕಲತೆಯ ಕುರಿತು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರಗಳನ್ನು ಪಡೆದಿರಬೇಕು
14. ಮೇಲ್ಕಂಡ ಕ್ರಮ ಸಂಖ್ಯೆ.11, 12 ಮತ್ತು 13 ರ ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
15. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ), ಬೆರಳಚ್ಚು ಪರೀಕ್ಷೆಗಳ ಪ್ರಮಾಣಪತ್ರಗಳು, ಜಾತಿ ಪ್ರಮಾಣ ಪತ್ರ, ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.
16. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
17. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗತಕ್ಕದ್ದು.

(ಶುಭ ಗೌಡರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

PRL. DISTRICT & SESSIONS JUDGE
CHIKMAGALUR

ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆಃ
ಮಹಾವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

**ಅಧಿಸೂಚನೆಯ ನಕಲನ್ನು ಪ್ರಚಾರಕ್ಕಾಗಿ ಈ ಕೆಳಕಂಡವರುಗಳಿಗೆ ರವಾನಿಸಲಾಗಿದೆಃ**

1. ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ್, ಕಲಬುರಗಿ, ಹಾಸನ, ಹಾವೇರಿ, ಕಾರವಾರ(ಉ.ಕ.), ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು(ದ.ಕ.), ಮಂಡ್ಯ, ಮೈಸೂರು, ರಾಮನಗರ, ರಾಯಚೂರು, ತುಮಕೂರು, ಶಿವಮೊಗ್ಗ, ಉಡುಪಿ, ಮತ್ತು ಯಾದಗೀರ್.
2. ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ನ್ಯಾಯಾಧೀಶರುಗಳಿಗೆ
3. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-59.
4. ಜಿಲ್ಲಾ ವಾರ್ತಾಧಿಕಾರಿ, ವಾರ್ತಾ ಇಲಾಖೆ, ಚಿಕ್ಕಮಗಳೂರು.
5. ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು
6. ಆಯುಕ್ತರು, ವಾರ್ತಾ ಮತ್ತು ಪ್ರಚಾರ ಇಲಾಖೆ, ನಂ.17, ಭಗವಾನ್ ಮಹಾವೀರ ಜೈನ್ ರಸ್ತೆ, ಬೆಂಗಳೂರು 560001. ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
7. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ
8. ಕಛೇರಿ ಪ್ರತಿ.